101

ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮೆ: ಶ್ರೀ ಅಂಗಡಿ ದತ್ ಶುಗರ್ಸ್ ಲಿ., (M/s. Sree Angadi Dutt Sugars Ltd.) ರವರಿಗೆ 19 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ನಿರಾಕ್ಷೇಪಣೆ ನೀಡುವ ಕುರಿತು.

ಓದಲಾಗಿದೆ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ರವರು ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುವ ಕಡತ ಸಂಖ್ಯೆ: 101

ಸಂ. 2732
ದಿನಾಂಕ: 05/10/16
ಬೆಂಗಳೂರು

* * *

ಪ್ರಸ್ತಾವನೆ :-

ಮೆ: ಶ್ರೀ ಅಂಗಡಿ ದತ್ ಶುಗರ್ಸ್ ಲಿ., (M/s. Sree Angadi Dutt Sugars Ltd.) ರವರಿಗೆ ಧಾರವಾಡ ಜಿಲ್ಲೆ ಮತ್ತು ತಾಲ್ಲೂಕಿನ ಹೊಸವಾಳ ಗ್ರಾಮದಲ್ಲಿ 19 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ಅನುಮತಿ ಕೋರಿ ಸಲ್ಲಿಸಿರುವ ಪ್ರಸ್ತಾವನೆಯ ಯೋಜನಾ ಸ್ಥಳದ ವಿವರಗಳು ಮತ್ತು ಈ ಕೆಳಕಂಡ ಮಾಹಿತಿಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಏಕ ಕಡತ ಪದ್ಧತಿಯಡಿ ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

| | | |
|---|---|---|
| ಯೋಜನಾ ಪ್ರದೇಶದ ಜಮೀನಿನ ವಿಧ | : | ಖಾಸಗಿ ಜಮೀನು |
| PAN ನಂಬರ್ | | AASCS6659L |
| ಕಂಪನಿಯ CIN ನಂಬರ್ | : | U15421KA2009PLC048787 |
| ಪವರ್ ಇವಾಕ್ಯೂಯೇಷನ್ ಒಳಗೊಂಡಂತೆ ಯೋಜನೆಯ ಅಂದಾಜು ವೆಚ್ಚ | : | ರೂ.103.00 ಕೋಟಿಗಳು (ರೂಪಾಯಿ ಒಂದು ನೂರ ಮೂರು ಕೋಟಿಗಳು ಮಾತ್ರ) |
| ಋತುವಲ್ಲದ ಅವಧಿಯಲ್ಲಿ ಯೋಜನೆಯಿಂದ ಉತ್ಪಾನೆಯಾಗುವ ವಿದ್ಯುತ್ ಪ್ರಮಾಣ | | 17.00 ಮೆಗಾ ವ್ಯಾಟ್ |
| ಋತುವಿನ ಅವಧಿಯಲ್ಲಿ ಯೋಜನೆಯಿಂದ ಉತ್ಪಾನೆಯಾಗುವ ವಿದ್ಯುತ್ ಪ್ರಮಾಣ | : | 12.91 ಮೆಗಾ ವ್ಯಾಟ್ |
| ಉತ್ಪಾದನೆಯಾಗುವ ವಿದ್ಯುತ್ತಿನ ಉಪಯೋಗದ ವಿಧಾನ | : | ಸ್ವಂತಕ್ಕೆ ಅಥವಾ 3ನೇ ವ್ಯಕ್ತಿಗೆ ಮಾರಾಟ ಮಾಡಲು |
| ಸಮೀಪದ ಸಬ್-ಸ್ಟೇಷನ್ ವಿವರ | : | ಬೇಲೂರು ಸಬ್-ಸ್ಟೇಷನ್ |
| ನಿಗದಿತ ಶುಲ್ಕ ಪಾವತಿಸಲಾಗಿದೆಯೇ | : | ಹೌದು. |

ಈ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಮೆ: ಶ್ರೀ ಅಂಗಡಿ ದತ್ ಶುಗರ್ಸ್ ಲಿ., (M/s. Sree Angadi Dutt Sugars Ltd.) ರವರಿಗೆ ಧಾರವಾಡ ಜಿಲ್ಲೆ ಮತ್ತು ತಾಲ್ಲೂಕಿನ ಹೊಸವಾಳ ಗ್ರಾಮದಲ್ಲಿ 19 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸುವ ಪ್ರಸ್ತಾವನೆಗೆ ಹಂಚಿಕೆ ಸಮಿತಿಯ ಶಿಫಾರಸ್ಸನ್ನು ಕಾಯ್ದಿರಿಸಿ ಸರ್ಕಾರವು ಅನುಮೋದನೆಯನ್ನು ನೀಡಲು ತೀರ್ಮಾನಿಸಿ ಈ ಕೆಳಗಿನಂತೆ ಆದೇಶಿಸುತ್ತದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 183 ಎನ್‌ಸಿಇ 2016,**
**ಬೆಂಗಳೂರು, ದಿನಾಂಕ: 27.09.2016.**

ಮೆ: ಶ್ರೀ ಅಂಗಡಿ ದತ್ ಶುಗರ್ಸ್ ಲಿ., (M/s. Sree Angadi Dutt Sugars Ltd.) ರವರಿಗೆ ಧಾರವಾಡ ಜಿಲ್ಲೆ ಮತ್ತು ತಾಲ್ಲೂಕಿನ ಹೊಸವಾಳ ಗ್ರಾಮದಲ್ಲಿ 19 ಮೆ.ವ್ಯಾ. ಸಾಮರ್ಥ್ಯದ ಸಹ-ವಿದ್ಯುತ್ ಘಟಕ ಸ್ಥಾಪಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ನಿರಾಕ್ಷೇಪಣೆಯನ್ನು ನೀಡಲಾಗಿದೆ.

GM (Tech) I/C
KREDL

1. ಅಭಿವೃದ್ಧಿದಾರರು ಉತ್ಪಾದಿಸುವ ವಿದ್ಯುತ್‌ನ ಇವಾಕ್ಯೂಯೇಷನ್‌ಗೆ ಸಂಬಂಧಿಸಿದಂತೆ, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ಪ್ರತ್ಯೇಕ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು;

--2)

2. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಅಗತ್ಯವಿರುವ ಸಂಬಂಧಿಸಿದ ಇಲಾಖೆಗಳ/ಸಂಸ್ಥೆಗಳ ಅಂದರೆ, ಅರಣ್ಯ / ಕಂದಾಯ ಇಲಾಖೆ, ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ ಮತ್ತು ಇತರೆ ಪ್ರಾಧಿಕಾರಗಳಿಂದ ಅನುಮೋದನೆ ಪಡೆದುಕೊಳ್ಳತಕ್ಕದ್ದು;
3. ಅಭಿವೃದ್ಧಿದಾರರು ಯೋಜನೆಯಿಂದ ಉತ್ಪಾದನೆಯಾಗುವ ವಿದ್ಯುತ್‌ನ್ನು ಸ್ವಂತ ಬಳಕೆಗೆ ಉಪಯೋಗಿಸಿಕೊಳ್ಳಲು / ಹೆಚ್ಚುವರಿ ವಿದ್ಯುತ್‌ನ್ನು ಮಾರಾಟ ಮಾಡುವ ಕುರಿತು ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ ವಿದ್ಯುತ್ ಖರೀದಿ ಒಪ್ಪಂದ (ಪಿಪಿಎ) ಮಾಡಿಕೊಳ್ಳಲು Open access ಮೂಲಕ 3ನೇ ವ್ಯಕ್ತಿಗೆ ಮಾರಾಟ ಮಾಡಲು ಅನುಮತಿಸಿದೆ;
4. ಅಭಿವೃದ್ಧಿದಾರರು ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ಕೆ.ಆರ್.ಇ.ಡಿ.ಎಲ್.ಗೆ ಶುಲ್ಕ ಪಾವತಿಸತಕ್ಕದ್ದು;
5. ಈ ಆದೇಶವು ಮುಂದಿನ ಹಂಚಿಕೆ ಸಮಿತಿ ಸಭೆಯಲ್ಲಿ ಸ್ಥಿರೀಕರಿಸಿಕೊಳ್ಳುವ ಷರತ್ತಿಗೊಳಪಟ್ಟಿರುತ್ತದೆ.

ಈ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

**ಇವರಿಗೆ:**

ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

ಪ್ರತಿ:

1 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ/ ಬಹುಮಹಡಿ ಕಟ್ಟಡ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ, ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
4 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ.39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆ ರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
5 ಜಿಲ್ಲಾಧಿಕಾರಿಗಳು, ಧಾರವಾಡ ಜಿಲ್ಲೆ, ಧಾರವಾಡ.
6 ಉಪ ಅರಣ್ಯ ಸಂರಕ್ಷಣಾಧಿಕಾರಿ, ಧಾರವಾಡ ಜಿಲ್ಲೆ, ಧಾರವಾಡ.
7 ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಧಾರವಾಡ.
8 ಕಾರ್ಯದರ್ಶಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಪರಿಸರ ಭವನ, ಚರ್ಚ್‌ಸ್ಟ್ರೀಟ್ ರಸ್ತೆ, ಬೆಂಗಳೂರು-01.
9 The Managing Director, M/s Angadi Datta sugar Factory, Hosavala Village, Dharwad Taluk & District.
10 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
11 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
12 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
13 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.